ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಹೊಸದುರ್ಗ.

ಕ್ರಿಮಿನಲ್ ಮೊಕದ್ದಮೆ ಸಂಖ್ಯೆ: **122/2023**

ಪಿಡಬ್ಲ್ಯೂ- **6**
ಸಿಡಬ್ಲ್ಯೂ- **9**

ಸಾಕ್ಷಿಗೆ ದಿನಾಂಕ **10.07.2026** ರಂದು ಪ್ರಮಾಣ ವಚನ ಬೋಧಿಸಲಾಯಿತು.

ಸಾಕ್ಷಿಯ ಹೆಸರು : ದಾದಾಪೀರ್ ಪಿ ಬಿ

ತಂದೆಯ ಹೆಸರು : ಬುಡೇನ್ ಸಾಬ್

ವಯಸ್ಸು : 53 ವರ್ಷ

ಉದ್ಯೋಗ : ಎ ಎಸ್ ಐ ಹೊಳಲ್ಕೆರೆ ಪೋಲೀಸ್ ಠಾಣೆ

ವಾಸಸ್ಥಳ : ಹೊಳಲ್ಕೆರೆ

ಮುಖ್ಯವಿಚಾರಣೆ ಮಾನ್ಯ ಸ.ಸ.ಅ ರವರಿಂದ

ನಾನು ಜುಲೈ 2022 ರಿಂದ ಜುಲೈ 2023 ರವರೆಗೆ ಹೊಸದುರ್ಗ ಪೊಲೀಸ್ ಠಾಣೆಯಲ್ಲಿ ಎ ಎಸ್ ಐ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿನಾಂಕ: 02.09.2022 ರಂದು ನಾನು ಹೊಸದುರ್ಗ ಪೊಲೀಸ್ ಠಾಣೆಯ ಎಸ್ ಎಚ್ ಓ ಪ್ರಭಾರದಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾಗ ಚಾಸಾ-1 ರವರು ಸಂಜೆ 4.55 ಗಂಟೆಗೆ ನೀಡಿದ ಜ್ಞಾಪನವನ್ನು ಸ್ವೀಕರಿಸಿ ಠಾಣಾ ಮೊಕದ್ದಮೆ ಸಂಖ್ಯೆ: 372/2022 ರಂತೆ ಕರ್ನಾಟಕ ಅಬಕಾರಿ ಕಾಯಿದೆ ಕಲಂ.32 ಮತ್ತು 34 ರ ಅಡಿಯಲ್ಲಿ ಪ್ರ.ವ.ವರದಿಯನ್ನು ತಯಾರಿಸಿ ಮೇಲಧಿಕಾರಿಗಳಿಗೆ ಮತ್ತು ಘನ ನ್ಯಾಯಾಲಯಕ್ಕೆ ನಿವೇದಿಸಿಕೊಂಡಿರುತ್ತೇನೆ. ಅದೇ ದಿನ ಸಂಜೆ 7.00 ಗಂಟೆಗೆ ಚಾಸಾ-1 ರವರು ಹಾಜರುಪಡಿಸಿದ ಅಮಾನತ್ ಪಂಚನಾಮೆ, ಮತ್ತು ವಶಪಡಿಸಿಕೊಂಡ ಮದ್ಯದ 90 ಎಂ ಎಲ್ ನ 48 ರಾಜಾ ವಿಸ್ಕಿ ಮದ್ಯ ತುಂಬಿದ ಸೀಲ್ ಮಾಡಿದ ಪೌಚ್ ಗಳನ್ನು ಸ್ವಿಕರಿಸಿ ಸ್ವತ್ತುಗಳ ಪಟ್ಟಿಯನ್ನು ಪಿ.ಎಫ್‌ನಂ. 191/2022 ರಂತೆ ನೋಂದಾಯಿಸಿಕೊಂಡು ಘನ ನ್ಯಾಯಾಲಯಕ್ಕೆ ನಿವೇದಿಸಿಕೊಂಡಿರುತ್ತೇನೆ.

ದಿ.20.09.2022 ರಂದು ಚಾಸಾ-9 ರವರು ಮದ್ಯದ ಸ್ವತ್ತುಗಳನ್ನು ರಾಸಾಯನಿಕ ಪರೀಕ್ಷಾ ಕೇಂದ್ರಕ್ಕೆ ಕಳಿಸಿಕೊಟ್ಟಿರುತ್ತಾರೆ. ನಂತರ ದಿ.21.9.2022 ರಂದು ಸದರಿ ಚಾಸಾ-2 ರಿಂದ 6 ರವರ ವಿಚಾರಣೆ ಮಾಡಿ ಅವರ ಹೇಳಿಕೆಗಳನ್ನು ದಾಖಲಿಸಿ ಕಡತಕ್ಕೆ ಅಳವಡಿಸಿಕೊಂಡಿರುತ್ತೇನೆ.

ನಂತರ ಕಡತನವನ್ನು ಮುಂದಿನ ಕ್ರಮಕ್ಕಾಗಿ ಚಾಸಾ - 11 ರವರಿಗೆ ವಹಿಸಿಕೊಟ್ಟಿರುತ್ತೇನೆ.

ಸಾಕ್ಷಿಯ ಜ್ಞಾಪನವನ್ನು ನೋಡಿ ಗುರುತಿಸಿದ್ದು ಅದನ್ನು ಈಗಾಗಲೇ ನಿಪಿ-6 ಎಂದು ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ನಿಪಿ-6(ಬಿ) ಎಂದು ಗುರುತಿಸಲಾಯಿತು. ಪ್ರ ವ ವರದಿಯನ್ನು ನಿಪಿ-**8** ಎಂದು ಸಾಕ್ಷಿಯ ಸಹಿಯನ್ನು ನಿಪಿ-8(ಎ) ಎಂದು ಗುರುತಿಸಲಾಯಿತು. ಸ್ವತ್ತು ಪಟ್ಟಿಯನ್ನು ನೋಡಿ ಗುರುತಿಸಿದ್ದು ನಿಪಿ-9 ಎಂದು ಸಾಕ್ಷಿಯ ಸಹಿಯನ್ನು ನಿಪಿ-9(ಎ) ಎಂದು ಗುರುತಿಸಲಾಯಿತು. ಚಾಸಾ-2 ರವರ ಹೇಳಿಕೆಯನ್ನು ಈಗಾಗಲೇ ನಿಪಿ-2 ಎಂದು ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ನಿಪಿ-2(ಎ) ಎಂದು ಗುರುತಿಸಲಾಯಿತು. ಚಾಸಾ-3 ರವರ ಹೇಳಿಕೆಯನ್ನು ಈಗಾಗಲೇ ನಿಪಿ-3 ಎಂದು ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ನಿಪಿ-3(ಎ) ಎಂದು ಗುರುತಿಸಲಾಯಿತು. ಚಾ.ಸಾ-4 ರವರ ಹೇಳಿಕೆಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ-4 ಎಂದು ಗುರುತಿಸಿದ್ದು, ಸಾಕ್ಷಿ ಸಹಿಯನ್ನು ನಿಪಿ-4(ಎ) ಎಂದು ಗುರುತಿಸಲಾಯಿತು. ಚಾ.ಸಾ-5 ರವರ ಹೇಳಿಕೆಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ-**10** ಎಂದು ಗುರುತಿಸಿದ್ದು, ಸಾಕ್ಷಿ ಸಹಿಯನ್ನು ನಿಪಿ-10(ಎ) ಎಂದು ಗುರುತಿಸಲಾಯಿತು. ಚಾ.ಸಾ-6 ರವರ ಹೇಳಿಕೆಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ-**11** ಎಂದು ಗುರುತಿಸಿದ್ದು, ಸಾಕ್ಷಿ ಸಹಿಯನ್ನು ನಿಪಿ-11(ಎ) ಎಂದು ಗುರುತಿಸಲಾಯಿತು.

ಚಾ.ಸಾ-1 ರವರು ರಾಸಾಯನಿಕ ಪರೀಕ್ಷೆಗಾಗಿ ಮಾದರಿಗೆ ತೆಗೆದು ಹಾಜರು ಪಡಿಸಿದ ಪೌಚ್ ಗಳನ್ನು ನೋಡಿ ಗುರುತಿಸಿದ್ದು, ಅವುಗಳನ್ನು ಈಗಾಗಲೇ ಒಟ್ಟಾಗಿ ಮು.ಮಾ-1 ಎಂದು ಗುರುತಿಸಲಾಗಿದೆ.

ಪಾಟೀ ಸವಾಲು ಶ್ರೀಮತಿ ಎಚ್ ಎಸ್ ಆರ್ ಆರೋಪಿತರ ಪರ ವಕೀಲರಿಂದಃ

ನಾನು ಚಾ.ಸಾ-1 ರವರಿಂದ ಯಾವುದೇ ಜ್ಞಾಪನವನ್ನು ಪಡೆದುಕೊಂಡಿರುವುದಿಲ್ಲ ಎಂದರೆ ಸರಿಯಲ್ಲ. ಪ್ರ.ವ.ವರದಿಯನ್ನು ನಾನೇ ತಯಾರು ಮಾಡಿರುತ್ತೇನೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಜ್ಞಾಪನವನ್ನು ಹಾಜರು ಮಾಡಿದ ನಂತರ ಪ್ರ.ವ.ವರದಿಯನ್ನು ತಯಾರಿಸಿರುತ್ತೇನೆ. ಮಾಲುಪಟ್ಟಿಯನ್ನು ತಯಾರಿಸಿರುತ್ತೇನೆ ಎಂದು ಹೇಳಿರುವುದು ಸುಳ್ಳು ಎಂದರೆ ಸರಿಯಲ್ಲ. ಚಾ.ಸಾ-2 ರಿಂದ 6 ರವರ

ಹೇಳಿಕೆಗಳನ್ನು ಪಡೆದಿರುವುದಿಲ್ಲ ಎಂದರೆ ಸರಿಯಲ್ಲ. ಎಲ್ಲಾ ದಾಖಲೆಗಳನ್ನು ಠಾಣೆಯಲ್ಲೇ ಸೃಷ್ಠಿ ಮಾಡಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ದಾಳಿ ಮಾಡುವ ಮೊದಲೇ ಪ್ರ.ವ.ವರದಿಯನ್ನು ತಯಾರಿಸಿರುತ್ತೇವೆ ಎಂದರೆ ಸರಿಯಲ್ಲ.

ಠಾಣಾ ಅಂಕಿಸಂಖ್ಯೆಗೋಸ್ಕರ ಸುಳ್ಳು ಪ್ರಕರಣ ದಾಖಲಿಸಿ ಸುಳ್ಳು ಸಾಕ್ಷ್ಯ ನುಡಿಯತಿದ್ದೇನೆ ಎಂದರೆ ಸರಿಯಲ್ಲ. ನಿ.ಪಿ-1 ರಿಂದ 11ರ ದಾಖಲೆಗಳನ್ನು ಠಾಣೆಯಲ್ಲೇ ಸೃಷ್ಠಿಸಿರುತ್ತೇನೆ ಎಂದರೆ ಸರಿಯಲ್ಲ. ಮು.ಮಾ ಗೂ ಆರೋಪಿಗೂ ಮತ್ತು ಈ ಪ್ರಕರಣಕ್ಕೂ ಯಾವುದೇ ಸಂಬಂಧ ಇರುವುದಿಲ್ಲ ಎಂದರೆ ಸರಿಯಲ್ಲ. ಮೇಲಾಧಿಕಾರಿಗಳ ಒತ್ತಡದ ಮೇರೆಗೆ ಆರೋಪಿಯ ವಿರುದ್ಧ ಸುಳ್ಳು ಪ್ರಕರಣ ದಾಖಲಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರುವಿಚಾರಣೆ ಇಲ್ಲ.

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಖ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)**
ಓ.ಹೇ.ಕೆ.ಸರಿ ಅದೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು ಹಾಗೂ
ಪ್ರ.ದ.ನ್ಯಾ.ದಂಡಾಧಿಕಾರಿಗಳು,
ಹೊಸದುರ್ಗ.